ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

**ಬಿಡಬ್ಲ್ಯುಎಸ್ಎಸ್‌ಬಿ ಮತ್ತು ಕೆಎಸ್‌ಡಿಎಲ್ ಸಂಸ್ಥೆಯಲ್ಲಿನ ವಿವಿಧ ಹುದ್ದೆಗಳ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆ–2026 ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ.**

**(ವಿವರವಾದ ವೇಳಾಪಟ್ಟಿಯನ್ನು 19–11–2025 ರ ಪ್ರಕಟಣೆಯಲ್ಲಿ ನೀಡಲಾಗಿದೆ)**

## ಪರೀಕ್ಷಾ ವೇಳಾಪಟ್ಟಿ

| ದಿನಾಂಕ : | ದಿನ : | ಸಮಯ : | ವಿಷಯ : | ಅಂಕಗಳು: | ಋಣಾತ್ಮಕ ಮೌಲ್ಯಮಾಪನವಿದ್ದು, |
|---|---|---|---|---|---|
| 10–01–2026 | ಶನಿವಾರ | ಮಧ್ಯಾಹ್ನ 3.00 ರಿಂದ ಸಂಜೆ 5.00 | ನಿರ್ದಿಷ್ಟ ಪತ್ರಿಕೆ–2 | 100 | (negative marking), ಪ್ರತಿ ತಪ್ಪು ಉತ್ತರಕ್ಕೆ 1/4 ಅಂಕಗಳನ್ನು ಕಳೆಯಲಾಗುವುದು |

## *ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು*

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ ಸಂ | ಬೆಲ್ ಸಂಖ್ಯೆ | ಮಧ್ಯಾಹ್ನದ ಅವಧಿ | ವಿವರಗಳು |
|---|---|---|---|
| 01 | ಮೊದಲನೇ ಬೆಲ್ | ಮ. 2.30 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದರೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ. ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಹೆಸರನ್ನು ಬರೆಯಬೇಕು.<br>• ನಂತರ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಎಚ್ಚರದಿಂದ ನೊಂದಣಿ ಸಂಖ್ಯೆಯನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ತಪ್ಪದೇ ತುಂಬಬೇಕು. (ಮತ್ತೊಮ್ಮೆ ಪರಿಶೀಲಿಸುವುದು ಸೂಕ್ತ.)<br>• ಅಭ್ಯರ್ಥಿಗಳು ತಾವು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಬರೆದಿರುವ ನೊಂದಣಿ ಸಂಖ್ಯೆಯನ್ನು, ಪ್ರವೇಶ ಪತ್ರದಲ್ಲಿ ಮುದ್ರಿತವಾಗಿರುವ ನೊಂದಣಿ ಸಂಖ್ಯೆಗೆ ಅನುಗುಣವಾಗಿದೆಯೆ ಎಂದು ಪರಿಶೀಲಿಸಿಕೊಳ್ಳಬೇಕು. |
| 02 | ಎರಡನೇ ಬೆಲ್ | ಮ. 2.45 | • ಎರಡನೆಯ ಬೆಲ್ ಆದ ನಂತರ ಮ. 2.50 ಕ್ಕೆ, ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. **"ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ".** ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>• ಮ. 2.55 ಕ್ಕೆ ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆದು, ನಂತರ ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯಲ್ಲಿನ ವರ್ಷನ್ ಕೋಡ್ ಮತ್ತು ಕ್ರಮ ಸಂಖ್ಯೆಯನ್ನು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿನ ನಿಗದಿತ ಜಾಗದಲ್ಲಿ ಬರೆದು ಅದಕ್ಕೆ ಸಂಬಂಧಿಸಿದ ವೃತ್ತಗಳನ್ನು ತುಂಬಬೇಕು. ನಂತರ ಅಭ್ಯರ್ಥಿಗಳು ಓಎಂಆರ್‌ನಲ್ಲಿ ನಿಗದಿತ ಜಾಗದಲ್ಲಿ ಸಹಿಯನ್ನು ಹಾಕುತ್ತಾರೆ.<br>**ವಿ.ಸೂ.:** ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ / ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಮ. 3.00 | •ಅಭ್ಯರ್ಥಿಗಳು ಓಎಂಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>•ಈ ಬೆಲ್ ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಮ. 4.00 | •ಇದು ಮೊದಲನೆಯ ಎಚ್ಚರಿಕೆ ಬೆಲ್ – ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ. |
| 05 | ಐದನೇ ಬೆಲ್ | ಸಂ. 4.30 | •ಇದು ಎರಡನೆಯ ಎಚ್ಚರಿಕೆ ಬೆಲ್ – ಪರೀಕ್ಷೆ ಮುಗಿಯಲು ಮೂವತ್ತು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ |
| 06 | ಆರನೇ ಬೆಲ್ | ಸಂ. 4.55 | •ಇದು ಕೊನೆಯ ಎಚ್ಚರಿಕೆಯ ಬೆಲ್ – ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ. |
| 07 | ಏಳನೆ ಬೆಲ್ | ಸಂ.5.00 | • ಪರೀಕ್ಷೆ ಮುಕ್ತಾಯ. ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು.<br>•ಸದರಿ ಬೆಲ್ ಆದ ನಂತರ ಉತ್ತರಿಸದೇ ಇರುವ ಪ್ರಶ್ನೆಗಳಿಗೆ ಐದನೇ ಆಯ್ಕೆ / ವೃತ್ತವನ್ನು ಶೇಡ್ ಮಾಡಲು ಹೆಚ್ಚುವರಿಯಾಗಿ ಐದು ನಿಮಿಷಗಳನ್ನು ಕೊಡಲಾಗುವುದು. (ಯಾವುದೇ ಆಯ್ಕೆಯನ್ನು / ವೃತ್ತವನ್ನು ಶೇಡ್ ಮಾಡಿಲ್ಲದಿದ್ದರೆ, ಪ್ರತಿ ಪ್ರಶ್ನೆಗೆ 1/4 ಅಂಕಗಳನ್ನು ಕಡಿತಗೊಳಿಸಲಾಗುತ್ತದೆ.) |
| 08 | ಏಳನೇ ಹಾಗೂ ಕೊನೆಯ ಬೆಲ್ | ಸಂ. 5.05 | • ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>• ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕಚೇರಿ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಹಿಂದಿರುಗಿಸಬೇಕು. |

**ಗಮನಿಸಿ:** ಪರೀಕ್ಷಾ ಕರ್ತವ್ಯದಲ್ಲಿ ನಿರತರಾಗಿರುವ ಅಧಿಕಾರಿಗಳು ನೀಡುವ ಎಲ್ಲಾ ಸೂಚನೆಗಳನ್ನು ಅಭ್ಯರ್ಥಿಗಳು ತಪ್ಪದೇ ಪಾಲಿಸಬೇಕು. ಸೂಚನೆಗಳನ್ನು ಪಾಲಿಸದೇ ಇರುವ ಅಭ್ಯರ್ಥಿಗಳನ್ನು ದುಷ್ಕೃತ್ಯದ ವಿಧಾನವೆಂದು ಪರಿಗಣಿಸಲಾಗುವುದು; ಹಾಗು ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಲ್ಲಿ ಈ ಕೆಳಕಂಡ ರೀತಿಯ ತಪ್ಪುಗಳನ್ನು ಎಸಗಿದಲ್ಲಿ; ಅಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತು ಕ್ರಮ / ಅಪರಾಧ ಮೊಕದ್ದಮೆಯನ್ನು ಹೂಡಲಾಗುವುದು:

ಗಲಾಟೆ ಮಾಡಿದರೆ / ನಿಶ್ಶಬ್ಧತೆಯನ್ನು ಕಾಪಾಡದಿದ್ದರೆ; ಪರೀಕ್ಷಾ ಸಮಯದಲ್ಲಿ ವಿಷಯಕ್ಕೆ ಸಂಬಂಧಿಸಿದ ಪುಸ್ತಕ, ಚೀಟಿ ಇತ್ಯಾದಿಗಳನ್ನು ಬಳಸಿದರೆ; ಬೇರೆ ಅಭ್ಯರ್ಥಿಗಳ ಜೊತೆ ಮಾತನಾಡುವುದು ಅಥವಾ ಸಂಜ್ಞೆ ಮಾಡುವುದು; ಅಭ್ಯರ್ಥಿಯು ಬೇರೆ ಅಭ್ಯರ್ಥಿಗಳ ಉತ್ತರ ಪತ್ರಿಕೆಯಿಂದ ಅಥವಾ ಇನ್ನಾವುದೇ ಮೂಲಗಳಿಂದ ನಕಲು ಮಾಡುತ್ತಿದ್ದರೆ; ಅಭ್ಯರ್ಥಿಯು ತನ್ನ ಉತ್ತರ ಪತ್ರಿಕೆ ಬೇರೆ ಕಡೆ ವರ್ಗಾಯಿಸಿದರೆ; ಬದಲಿ ಅಭ್ಯರ್ಥಿಯಾಗಿದ್ದರೆ; ಪರೀಕ್ಷಾ ಅವಧಿಯಲ್ಲಿ ಅಥವಾ ಪರೀಕ್ಷೆಯ ನಂತರ ಉತ್ತರ ಪತ್ರಿಕೆಯನ್ನು ಪರೀಕ್ಷಾ ಕೊಠಡಿಯಿಂದ ಹೊರಗಡೆ ತೆಗೆದುಕೊಂಡು ಹೋದಲ್ಲಿ; ಉತ್ತರ ಪತ್ರಿಕೆಯನ್ನು ಹರಿದು ಹಾಕುವುದು ಅಥವಾ ಇನ್ನಾವುದೇ ಪರೀಕ್ಷಾ ಅವ್ಯವಹಾರಗಳು ಕಂಡು ಬಂದಲ್ಲಿ.

ಸಹಿ/– ಕಾರ್ಯನಿರ್ವಾಹಕ ನಿರ್ದೇಶಕರು

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**